All India Radio: Bangalore
National Bulletin In Kannada
ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

26.01.2026 19.35 hrs

***************

ಮುಖ್ಯಾಂಶಗಳು

- ರಾಷ್ಟ್ರದ ಪ್ರಜಾಪ್ರಭುತ್ವದ ಶಕ್ತಿ ಮತ್ತು ಏಕತೆಯನ್ನು ಬಿಂಬಿಸಿದ ಗಣರಾಜ್ಯೋತ್ಸವ ಆಚರಣೆ: ಪ್ರಧಾನಿ ನರೇಂದ್ರ ಮೋದಿ
- ವಿದೇಶಗಳ ರಾಯಭಾರ ಕಚೇರಿಗಳಲ್ಲಿ ಉತ್ಸಾಹದಿಂದ ಗಣರಾಜ್ಯೋತ್ಸವ ಆಚರಣೆ- ಅನಿವಾಸಿ ಭಾರತೀಯರಲ್ಲಿ ಸಂತಸ
- ಕೇಂದ್ರ ಸರ್ಕಾರದಿಂದ ದ್ವಿದಳ ಧಾನ್ಯಗಳ ೧೦೦ ಪ್ರತಿಶತ ಖರೀದಿಗೆ ಕನಿಷ್ಠ ಬೆಂಬಲ ಬೆಲೆ: ಕೇಂದ್ರ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಘೋಷಣೆ
- ಮಹಿಳಾ ಪ್ರೀಮಿಯರ್ ಲೀಗ್ ಕ್ರಿಕೆಟ್: ರಾಯಲ್ ಚಾಲೆಂಜರ್ಸ್ ಬೆಂಗಳೂರು, ಮುಂಬೈ ಇಂಡಿಯನ್ಸ್ ತಂಡಗಳು ಮುಖಾಮುಖಿ.

*****************

ಭಾರತವು ಗಣರಾಜ್ಯೋತ್ಸವವನ್ನು ಅತ್ಯಂತ ಉತ್ಸಾಹ ಮತ್ತು ಹೆಮ್ಮೆಯಿಂದ ಆಚರಿಸಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ.

ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಪ್ರಧಾನಿಯವರು, ಕರ್ತವ್ಯ ಪಥದಲ್ಲಿ ನಡೆದ ಭವ್ಯವಾದ ಕಾರ್ಯಕ್ರಮವು, ದೇಶದ ಪ್ರಜಾಪ್ರಭುತ್ವದ ಶಕ್ತಿ, ಅದರ ಪರಂಪರೆಯ ಶ್ರೀಮಂತಿಕೆ ಮತ್ತು ರಾಷ್ಟ್ರವನ್ನು ಒಟ್ಟಿಗೆ ಬಂಧಿಸುವ ಏಕತೆಯನ್ನು ಪ್ರದರ್ಶಿಸಿತು ಎಂದು ತಿಳಿಸಿದ್ದಾರೆ. ಈ ಸಂಭ್ರಮಾಚರಣೆಯು ಭಾರತದ ಅಸಾಧಾರಣ ಭದ್ರತಾ ಉಪಕರಣವನ್ನು ಪ್ರದರ್ಶಿಸಿತು, ಇದು ರಾಷ್ಟ್ರದ ಸನ್ನದ್ಧತೆ, ತಾಂತ್ರಿಕ ಸಾಮರ್ಥ್ಯ ಮತ್ತು ತನ್ನ ನಾಗರಿಕರನ್ನು ರಕ್ಷಿಸುವ ಅಚಲ ಬದ್ಧತೆಯನ್ನು ಪ್ರತಿಬಿಂಬಿಸುತ್ತದೆ ಎಂದು ಅವರು ಹೇಳಿದ್ದಾರೆ.

ಗಣರಾಜ್ಯೋತ್ಸವದ ಸಂದರ್ಭದಲ್ಲಿ ಯುರೋಪಿಯನ್ ಕೌನ್ಸಿಲ್ ಅಧ್ಯಕ್ಷ ಆಂಟೋನಿಯೊ ಕೋಸ್ಟಾ ಮತ್ತು ಯುರೋಪಿಯನ್ ಕಮಿಷನ್ ಅಧ್ಯಕ್ಷೆ ಉರ್ಸುಲಾ ವಾನ್ ಡೆರ್ ಲೇಯೆನ್ ಅವರಿಗೆ ಆತಿಥ್ಯ ವಹಿಸುವ ಸೌಭಾಗ್ಯ ದೇಶಕ್ಕೆ ದೊರಕಿದೆ ಎಂದು ಪ್ರಧಾನಿಯವರು ಒತ್ತಿ ಹೇಳಿದ್ದಾರೆ. ಅವರ

ಉಪಸ್ಥಿತಿಯು ಭಾರತ-ಯುರೋಪಿಯನ್ ಒಕ್ಕೂಟದ ಪಾಲುದಾರಿಕೆಯ ಬೆಳೆಯುತ್ತಿರುವ ಬಲ ಮತ್ತು ಹಂಚಿಕೆಯ ಮೌಲ್ಯಗಳಿಗೆ ನಮ್ಮ ಬದ್ಧತೆಯನ್ನು ಒತ್ತಿಹೇಳುತ್ತದೆ. ಈ ಭೇಟಿಯು ವೈವಿಧ್ಯಮಯ ವಲಯಗಳಲ್ಲಿ ಭಾರತ ಮತ್ತು ಯುರೋಪ್ ನಡುವೆ ಆಳವಾದ ಸಹಕಾರಕ್ಕೆ ವೇಗವನ್ನು ನೀಡುತ್ತದೆ ಎಂದು ಅವರು ತಿಳಿಸಿದ್ದಾರೆ.

*****************

ಭಾರತದ ೭೭ನೇ ಗಣರಾಜ್ಯೋತ್ಸವವನ್ನು ಪ್ರಪಂಚದಾದ್ಯಂತ ವಿದೇಶಗಳಲ್ಲಿ ನೆಲೆಸಿರುವ ಅನಿವಾಸಿಗಳು, ಭಾರತೀಯ ರಾಯಭಾರ ಕಚೇರಿಗಳಲ್ಲಿ ಉತ್ಸಾಹದಿಂದ ಆಚರಿಸಿದರು. ತ್ರಿವರ್ಣ ಧ್ವಜವನ್ನು ಹಾರಿಸುವ ಮೂಲಕ ಅವರ ದೇಶಭಕ್ತಿಯ ಉತ್ಸಾಹ ಪ್ರದರ್ಶನಗೊಂಡಿತು.

ಬ್ರಿಟನ್‌ನ ದೊರೆ ಮೂರನೇ ಚಾರ್ಲ್ಸ್, ರಾಷ್ಟ್ರಪತಿ ದ್ರೌಪದಿ ಮುರ್ಮು ಮತ್ತು ಭಾರತದ ಜನರಿಗೆ ಗಣರಾಜ್ಯೋತ್ಸವದ ಶುಭಾಶಯಗಳನ್ನು ತಿಳಿಸಿದ್ದಾರೆ. ಕಾಮನ್‌ವೆಲ್ತ್ ಮೌಲ್ಯಗಳಲ್ಲಿ ಬೇರೂರಿರುವ ನಿರಂತರ ಭಾರತ-ಯುಕೆ ಪಾಲುದಾರಿಕೆಯನ್ನು ಶ್ಲಾಘಿಸಿದ ಅವರು, ಅಹಮದಾಬಾದ್‌ನಲ್ಲಿ ೨೦೩೦ರ ಕಾಮನ್‌ವೆಲ್ತ್ ಕ್ರೀಡಾಕೂಟವನ್ನು ಆಯೋಜನೆ ಮಾಡಲು ಅವಕಾಶ ಪಡೆದಿರುವ ಭಾರತವನ್ನು ಅಭಿನಂದಿಸಿದರು.

ಚೀನಾದ ಬೀಜಿಂಗ್‌ನಲ್ಲಿರುವ ರಾಯಭಾರಿ ಪ್ರದೀಪ್ ಕುಮಾರ್ ರಾವತ್ ತ್ರಿವರ್ಣ ಧ್ವಜವನ್ನು ಹಾರಿಸಿ, ರಾಷ್ಟ್ರಪತಿ ದ್ರೌಪದಿ ಮುರ್ಮು ಅವರ ಭಾಷಣದ ಆಯ್ದ ಭಾಗಗಳನ್ನು ಓದಿದರು. ಆಚರಣೆಗಳು ವಂದೇ ಮಾತರಂ ಮತ್ತು ಭಾರತ್ ಮಾತಾ ಕಿ ಜೈ ಘೋಷಣೆಗಳನ್ನು ಒಳಗೊಂಡಿದ್ದವು. ಚೀನೀ ಸಮುದಾಯ ಮತ್ತು ರಾಜತಾಂತ್ರಿಕ ದಳದ ೪೦೦ಕ್ಕೂ ಹೆಚ್ಚು ಸದಸ್ಯರು ಭಾಗವಹಿಸಿದ್ದ ಕಾರ್ಯಕ್ರಮದಲ್ಲಿ ಕಾನ್ಸುಲ್ ಜನರಲ್ ಪ್ರತೀಕ್ ಮಾಥುರ್ ಧ್ವಜಾರೋಹಣ ಮಾಡಿದರು.

ಅಮೆರಿಕದ ವಾಷಿಂಗ್ಟನ್‌ನಲ್ಲಿ ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರೂಬಿಯೊ ಭಾರತಕ್ಕೆ ಗಣರಾಜ್ಯೋತ್ಸವದ ಶುಭಾಶಯಗಳನ್ನು ಸಲ್ಲಿಸಿದರು. ಕ್ವಾಡ್ ಮೂಲಕ ನಮ್ಮ ಬಹು-ಹಂತದ ಸಹಕಾರಕ್ಕೆ ರಕ್ಷಣೆ, ಇಂಧನ, ನಿರ್ಣಾಯಕ ಖನಿಜಗಳು ಮತ್ತು ಉದಯೋನ್ಮುಖ ತಂತ್ರಜ್ಞಾನಗಳ ಕುರಿತು ಭಾರತ-ಯುಎಸ್ ನಿಕಟ ಸಹಭಾಗಿತ್ವವನ್ನು ಅವರು ಶ್ಲಾಘಿಸಿದರು.

ಸಿಂಗಾಪುರದಲ್ಲಿ, ಭಾರತೀಯ ಹೈಕಮಿಷನರ್ ಡಾ. ಶಿಲ್ಪಕ್ ಅಂಬುಲೆ ಅವರು ರಾಷ್ಟ್ರಪತಿಗಳ ಭಾಷಣವನ್ನು ಓದುವ ಮೂಲಕ ಗಣರಾಜ್ಯೋತ್ಸವವನ್ನು ಆಚರಿಸುವಲ್ಲಿ ಭಾರತೀಯ ವಲಸಿಗ

ಸಮುದಾಯವನ್ನು ಪ್ರತಿಬಿಂಬಿಸಿದರು. ಭಾರತೀಯ ಶಾಲೆಗಳ ವಿದ್ಯಾರ್ಥಿಗಳು ಸಾಂಸ್ಕೃತಿಕ ನೃತ್ಯವನ್ನು ಪ್ರದರ್ಶಿಸಿದರು. ಮುಂದಿನ ವಾರ ನಡೆಯಲಿರುವ ಸಿಂಗಾಪುರ್ ವೈಮಾನಿಕ ಪ್ರದರ್ಶನಕ್ಕೆ ಆಗಮಿಸಿದ ಸಾರಂಗ್ ಹೆಲಿಕಾಪ್ಟರ್ ತಂಡವು ಕಾರ್ಯಕ್ರಮದಲ್ಲಿ ಭಾಗವಹಿಸಿತು.

ಜಪಾನ್‌ನಲ್ಲಿ, ನಿಯೋಜಿತ ರಾಯಭಾರಿ ನಗ್ಮಾ ಎಂ ಮಲ್ಲಿಕ್ ಅವರು ಭಾರತದ ರಾಯಭಾರ ಕಚೇರಿಯಲ್ಲಿ ರಾಷ್ಟ್ರಧ್ವಜಾರೋಹಣ ನೆರವೇರಿಸಿದರು, ನಂತರ ರಾಷ್ಟ್ರಗೀತೆ ಮತ್ತು ರಾಷ್ಟ್ರಪತಿಗಳ ಭಾಷಣವನ್ನು ಅವರು ಓದಿದರು.

*****************

ಕರ್ನಾಟಕದಲ್ಲಿ ೭೭ನೇ ಗಣರಾಜ್ಯೋತ್ಸವ ಆಚರಣೆಯು ದೇಶಭಕ್ತಿಯ ಉತ್ಸಾಹ ಮತ್ತು ಸಾಂಸ್ಕೃತಿಕ ಸಂಭ್ರಮಗಳೊಂದಿಗೆ ನಡೆಯಿತು.

ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಬೆಂಗಳೂರಿನಲ್ಲಿ ಧ್ವಜಾರೋಹಣ ನೆರವೇರಿಸಿ ಭಾಷಣ ಮಾಡಿದರು. ತಾರತಮ್ಯ ವಸಾಹತುಶಾಹಿ ಮತ್ತು ಪುರಾತನ ಕಾನೂನುಗಳನ್ನು ತ್ಯಜಿಸಿ, ಸಾಮಾಜಿಕ, ಆರ್ಥಿಕ ಮತ್ತು ರಾಜಕೀಯ ನ್ಯಾಯದ ವಿಷಯಗಳಲ್ಲಿ ಎಲ್ಲರೂ ಸಮಾನರು ಎಂದು ಅವರು ಹೇಳಿದರು.

ಯಾವುದೇ ಸಂದರ್ಭದಲ್ಲೂ ಸಾರ್ವಜನಿಕರು ರಾಜಕೀಯ ಪ್ರಜಾಪ್ರಭುತ್ವದಿಂದ ಮಾತ್ರ ತೃಪ್ತರಾಗಬಾರದು, ರಾಜಕೀಯ ಪ್ರಜಾಪ್ರಭುತ್ವವನ್ನು ಸಾಮಾಜಿಕ ಪ್ರಜಾಪ್ರಭುತ್ವವನ್ನಾಗಿ ಎಲ್ಲರೂ ಪರಿಗಣಿಸಬೇಕು. ಸಾಮಾಜಿಕ ಪ್ರಜಾಪ್ರಭುತ್ವ ಎಂದರೆ ಸ್ವಾತಂತ್ರ್ಯ, ಸಮಾನತೆ ಮತ್ತು ಭ್ರಾತೃತ್ವವನ್ನು ಜೀವನದ ತತ್ವಗಳಾಗಿ ಗುರುತಿಸುವ ಜೀವನ ವಿಧಾನವಾಗಿದೆ ಎಂದು ಅವರು ತಿಳಿಸಿದರು.

*****************

ಸರ್ಕಾರವು ತೊಗರಿ, ಮಸೂರ್ ಮತ್ತು ಉದ್ದು ಸೇರಿದಂತೆ ದ್ವಿದಳ ಧಾನ್ಯಗಳ ೧೦೦ ಪ್ರತಿಶತ ಖರೀದಿಯನ್ನು ಕನಿಷ್ಠ ಬೆಂಬಲ ಬೆಲೆಯಲ್ಲಿ ಖಚಿತಪಡಿಸಿಕೊಳ್ಳಲು ಕೆಲಸ ಮಾಡುತ್ತಿದೆ ಎಂದು ಕೃಷಿ ಮತ್ತು ರೈತ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಇಂದು ಘೋಷಿಸಿದ್ದಾರೆ.

ನವದೆಹಲಿಯಲ್ಲಿ ೭೭ ನೇ ಗಣರಾಜ್ಯೋತ್ಸವದ ಸಂದರ್ಭದಲ್ಲಿ ಸರ್ಕಾರವು ವಿಶೇಷವಾಗಿ ಆಹ್ವಾನಿಸಿದ ರೈತರೊಂದಿಗೆ ಸಂವಾದ ನಡೆಸಿದ ಸಚಿವರು ಈ ಘೋಷಣೆಯನ್ನು ಮಾಡಿದ್ದಾರೆ.

ಕೃಷಿಯು ಭಾರತೀಯ ಆರ್ಥಿಕತೆಯ ಬೆನ್ನೆಲುಬಾಗಿದೆ. ದೇಶದ ಜನಸಂಖ್ಯೆಯ ಸುಮಾರು ೬೦ ಪ್ರತಿಶತ ಜನರು ನೇರವಾಗಿ ಅಥವಾ ಪರೋಕ್ಷವಾಗಿ ಕೃಷಿ ಮತ್ತು ಸಂಬಂಧಿತ ಚಟುವಟಿಕೆಗಳನ್ನು ಅವಲಂಬಿಸಿದ್ದಾರೆ. ಭಾರತವು ಚೀನಾವನ್ನು ಹಿಂದಿಕ್ಕಿ ವಿಶ್ವದ ಅತಿದೊಡ್ಡ ಅಕ್ಕಿ ಉತ್ಪಾದಕ ರಾಷ್ಟ್ರವಾಗಿದೆ, ಇದು ರೈತರಿಗೆ, ವಿಶೇಷವಾಗಿ ಬಾಸ್ಮತಿ ಅಕ್ಕಿ ಬೆಳೆಗಾರರಿಗೆ ಉತ್ತಮ ಬೆಲೆ ದೊರೆಯುವಂತೆ ಮಾಡಿದೆ. ದೇಶೀಯ ಬೆಳೆಗಾರರನ್ನು ರಕ್ಷಿಸಲು, ಸರ್ಕಾರವು ದ್ವಿದಳ ಧಾನ್ಯಗಳ ಮೇಲೆ ಶೇಕಡಾ ೩೦ ರಷ್ಟು ಆಮದು ಸುಂಕವನ್ನು ವಿಧಿಸಿದೆ ಎಂದು ಸಚಿವರು ಹೇಳಿದರು.

ಪ್ರಧಾನ ಮಂತ್ರಿ ಫಸಲ್ ಬಿಮಾ ಯೋಜನೆಯನ್ನು ಮತ್ತಷ್ಟು ಬಲಪಡಿಸಲಾಗುತ್ತಿದೆ. ಕಾಡು ಪ್ರಾಣಿಗಳು ಮತ್ತು ನೀರಿನ ಅಡಚಣೆಯಿಂದ ಉಂಟಾಗುವ ಬೆಳೆ ನಷ್ಟಗಳಿಗೆ ವಿಮಾ ರಕ್ಷಣೆಯನ್ನು ವಿಸ್ತರಿಸುವ ಬಗ್ಗೆ ಸರ್ಕಾರ ಪರಿಗಣಿಸುತ್ತಿದೆ ಎಂದ ಸಚಿವರು, ನಿಗದಿತ ಅವಧಿಯನ್ನು ಮೀರಿ ಕ್ಲೇಮ್ ಪಾವತಿಗಳು ವಿಳಂಬವಾದರೆ ವಿಮಾ ಕಂಪನಿಗಳು ಶೇಕಡಾ ೧೨ ರಷ್ಟು ಬಡ್ಡಿಯನ್ನು ಪಾವತಿಸಲು ಹೊಣೆಗಾರರಾಗಿರುತ್ತಾರೆ ಎಂದು ಘೋಷಿಸಿದರು.

*****************

ನವದೆಹಲಿಯಲ್ಲಿರುವ ಆಕಾಶವಾಣಿಯ ಪ್ರಧಾನ ಕಚೇರಿಯಲ್ಲಿ ಇಂದು ಗಣರಾಜ್ಯೋತ್ಸವನ್ನು ಆಚರಿಸಲಾಯಿತು.

ಇದೇ ಸಂದರ್ಭದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಮಾಹಿತಿ ಮತ್ತು ಪ್ರಸಾರ ಸಚಿವ ಅಶ್ವಿನಿ ವೈಷ್ಣವ್, ಪ್ರಧಾನಿ ನರೇಂದ್ರ ಮೋದಿಯವರ ಮನ್ ಕಿ ಬಾತ್ ಕಾರ್ಯಕ್ರಮವು ದೇಶದಾದ್ಯಂತ ಸಮಾಜದ ಪ್ರತಿಯೊಂದು ವರ್ಗದ ಜನರ ಸಕಾರಾತ್ಮಕ ಕೊಡುಗೆಗಳನ್ನು ಗುರುತಿಸುವ ಮತ್ತು ವರ್ಧಿಸುವ ವೇದಿಕೆಯಾಗಿ ಹೊರಹೊಮ್ಮುತ್ತಿದೆ. ಜನರು ಮಾಡುತ್ತಿರುವ ಸಕಾರಾತ್ಮಕ ಕೆಲಸಗಳಿಗೆ ಬೆಳಕು ಚೆಲ್ಲುವ ಮಾಧ್ಯಮವಾಗಿ ಮನ್ ಕಿ ಬಾತ್ ಕಾರ್ಯಕ್ರಮ ಕಾರ್ಯನಿರ್ವಹಿಸುತ್ತಿದೆ ಎಂದು ಅವರು ತಿಳಿಸಿದರು.

ಆಕಾಶವಾಣಿಯ ಮಹಾನಿರ್ದೇಶಕ ರಾಜೀವ್ ಕುಮಾರ್ ಜೈನ್ ಅವರು ಆಕಾಶವಾಣಿ ಭವನದಲ್ಲಿ ರಾಷ್ಟ್ರಧ್ವಜಾರೋಹಣ ನೆರವೇರಿಸಿದರು.

*****************

ದೆಹಲಿಯ ಕರ್ತವ್ಯ ಪಥದಲ್ಲಿ ನಡೆದ ೭೭ನೇ ಗಣರಾಜ್ಯೋತ್ಸವ ಪಥಸಂಚಲನದಲ್ಲಿ ಆಯುಷ್ ಸಚಿವಾಲಯದ ಸ್ತಬ್ಧಚಿತ್ರವನ್ನು ಪ್ರದರ್ಶಿಸಲಾಯಿತು.

ಈ ಸ್ತಬ್ಧಚಿತ್ರವು ಆಧುನಿಕ ತಂತ್ರಜ್ಞಾನದೊಂದಿಗೆ ಸಂಯೋಜಿಸಲ್ಪಟ್ಟ ಭಾರತೀಯ ಸಾಂಪ್ರದಾಯಿಕ ಔಷಧ ಪದ್ಧತಿಗಳ ಸಮಗ್ರ ನಿರೂಪಣೆಯನ್ನು ಪ್ರಸ್ತುತಪಡಿಸಿತು.

ಆಯುಷ್ ಕಾ ತಂತ್ರ್- ಸ್ವಾಸ್ಥ್ಯ ಕಿ ಮಂತ್ರ್ ಎಂಬ ಧ್ಯೇಯದಡಿಯಲ್ಲಿ ನಿರ್ಮಿಸಲ್ಪಟ್ಟ ಈ ಸ್ತಬ್ಧಚಿತ್ರವು ಆತ್ಮನಿರ್ಭರ ಭಾರತ ಮತ್ತು ಪ್ರಜಾಕೇಂದ್ರೀತ ಅಭಿವೃದ್ಧಿಯ ವಿಶಾಲ ರಾಷ್ಟ್ರೀಯ ದೃಷ್ಟಿಕೋನಕ್ಕೆ ಒತ್ತು ನೀಡುತ್ತದೆ ಎಂದು ಸಚಿವಾಲಯ ತಿಳಿಸಿದೆ.

*****************

ವೈದ್ಯಕೀಯ ಕ್ಷೇತ್ರದಲ್ಲಿನ ಅಪ್ರತಿಮ ಸೇವೆ ಹಾಗೂ ಸಾಮಾಜಿಕ ಬದ್ಧತೆಯನ್ನು ಗುರುತಿಸಿ ದಾವಣಗೆರೆಯ ಹೆಸರಾಂತ ವೈದ್ಯ ಡಾ. ಸುರೇಶ್ ಹನಗವಾಡಿ ಅವರಿಗೆ ಕೇಂದ್ರ ಸರ್ಕಾರವು ದೇಶದ ಪ್ರತಿಷ್ಠಿತ 'ಪದ್ಮಶ್ರೀ' ಪ್ರಶಸ್ತಿಯನ್ನು ಘೋಷಿಸಿದೆ.

ರಕ್ತ ಹೆಪ್ಪುಗಟ್ಟದ ಅಪರೂಪದ ಹಾಗೂ ಮಾರಣಾಂತಿಕ ಕಾಯಿಲೆಯಾದ 'ಹಿಮೋಫಿಲಿಯಾ' (Haemophilia) ನಿಯಂತ್ರಣ ಮತ್ತು ಚಿಕಿತ್ಸೆಯಲ್ಲಿ ಡಾ. ಹನಗವಾಡಿ ಅವರು ಕರ್ನಾಟಕದಲ್ಲಿ ಕ್ರಾಂತಿಕಾರಿ ಬದಲಾವಣೆ ತಂದಿದ್ದಾರೆ. ದಶಕಗಳ ಹಿಂದೆ ಈ ಕಾಯಿಲೆಯ ಬಗ್ಗೆ ಜನರಲ್ಲಿ ಅರಿವು ಇಲ್ಲದ ಕಾಲದಲ್ಲೇ ಕಾರ್ಯಪ್ರವೃತ್ತರಾದ ಇವರು, 'ಕರ್ನಾಟಕ ಹಿಮೋಫಿಲಿಯಾ ಸೊಸೈಟಿ'ಯನ್ನು ಸ್ಥಾಪಿಸುವ ಮೂಲಕ ಸಾವಿರಾರು ರೋಗಿಗಳಿಗೆ ಆಶಾಕಿರಣವಾಗಿದ್ದಾರೆ.

*****************

ವಡೋದರಾದ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಮಹಿಳಾ ಪ್ರೀಮಿಯರ್ ಲೀಗ್ ಕ್ರಿಕೆಟ್‌ನ ಇಂದಿನ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು, ಮುಂಬೈ ಇಂಡಿಯನ್ಸ್ ತಂಡಗಳು ಮುಖಾಮುಖಿಯಾಗಿವೆ.

ಟಾಸ್ ಸೋತು, ಬ್ಯಾಟಿಂಗ್ ಮಾಡುತ್ತಿರುವ ಮುಂಬೈ ತಂಡವು, ಇತ್ತೀಚಿನ ವರದಿ ಬಂದಾಗ ೨ ಓವರ್‌ಗಳಲ್ಲಿ, ವಿಕೆಟ್ ನಷ್ಟವಿಲ್ಲದೆ, ೫ ರನ್‌ಗಳಿಸಿ ಆಡುತ್ತಿದೆ.

********ಮುಕ್ತಾಯ*********